ದಿಃ 12-11-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲು : ಪ್ರತಿವಾದಿ ಪರ ಶ್ರೀ. **SJG** ವಕೀಲರಿಂದ:

ನನ್ನ ಸಾಕ್ಷ ಪ್ರಮಾಣ ಪತ್ರದಲ್ಲಿ ಬರೆದ ಸಂಗತಿಗಳು ಗೊತ್ತಿರುತ್ತದೆ. ದಾವಾ ಆಸ್ತಿಯ ಪೂರ್ವಕ್ಕೆ ಗಿರಿಣಿ, ಪಶ್ಚಿಮಕ್ಕೆ ಶಾಮರಾಯ ಚಳಿಗೇರಿ ರವರ ಆಸ್ತಿ, ಉತ್ತರಕ್ಕೆ ರಸ್ತೆ, ದಕ್ಷಿಣಕ್ಕೆ ಭೀಮಾಶಂಕರ ರವರ ಆಸ್ತಿ ಇರುತ್ತದೆ. ದಾವಾ ಆಸ್ತಿ ವಾದಿಯ ಹೆಸರಿನಲ್ಲಿ ಇರುತ್ತದೆ. ದಾವಾ ಆಸ್ತಿ ಸಂಃ 356 ಇರುತ್ತದೆ. ಉದ್ದ ಅಗಲ 50 X 50 ಅಡಿ ಇರುತ್ತದೆ.

ವಾದಿಗೆ ದಾವಾ ಆಸ್ತಿಗೆ ಸಂಬಂಧ ಇಲ್ಲಎಂದರೆ ಸರಿಯಲ್ಲ. ದಾವಾ ಆಸ್ತಿಗೆ ಪ್ರತಿವಾದಿ ಆಸ್ತಿಗೆ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಪ್ರತಿವಾದಿ ಆಸ್ತಿ ಸಂಃ 10/ಇ ಇರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಆಸ್ತಿ 100 X 50 ಅಡಿ ಇರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಪ್ರತಿವಾದಿ ತಂದೆ ಸದರಿ ಆಸ್ತಿ ಖರೀದಿಗೆ ಪಡೆದು ಮಗಳ ಹೆಸರಿಗೆ ಮಾಡಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ವಾದಿ ಪಂಚಾಯತಿಯಲ್ಲಿ ಕೆಲಸ ಮಾಡುತ್ತಿದ್ದ ಎಂದರೆ ಸರಿಯಲ್ಲ.

ದಾವಾ ಆಸ್ತಿ ಕುರಿತು ನನಗೆ ಯಾವುದೇ ಮಾಹಿತಿ ಇಲ್ಲದೇ ಇದ್ದರೂ ಸಹ ವಾದಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ ದಂಡಾಧಿಕಾರಿಗಳು
ಅಫಜಲಪೂರ